# ದಾವಣಗೆರೆ ವಿಶ್ವವಿದ್ಯಾನಿಲಯ
# DAVANGERE UNIVERSITY

ಕುಲಸಚಿವ (ಪರೀಕ್ಷಾಂಗ) ರವರ ಕಚೇರಿ,
ಶಿವಗಂಗೋತ್ರಿ, ದಾವಣಗೆರೆ-577007.
ದೂರವಾಣಿ ಸಂಖ್ಯೆ: 08192-208420

Office of the Registrar (Evaluation)
Shivagangothri, Davangere -577007.
Phone No. 08192-208420

Email: examination@davangereuniversity.ac.in


ಸಂಖ್ಯೆ:ದಾವಿವಿ:ಪವಿ:ಬಿ.ಇಡಿ-18:2026-27/ 70 ದಿನಾಂಕ:06.04.2026

## : ಪ್ರಕಟಣೆ :

ವಿಷಯ : ಮೇ-2026ರಲ್ಲಿ ಜರುಗಲಿರುವ ಬಿ.ಇಡಿ ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ (ರೆಗ್ಯುಲರ್ ಮತ್ತು ರಿಪೀಟರ್ಸ್), ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ : ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:02.04.2026

*****

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಬಿ.ಇಡಿ., ಕಾಲೇಜುಗಳ ಪ್ರಾಂಶುಪಾಲರಿಗೆ ಈ ಮೂಲಕ ತಿಳಿಯಪಡಿಸುವುದನೆಂದರೆ, ವಿಶ್ವವಿದ್ಯಾನಿಲಯದಲ್ಲಿ ಮೇ-2026ರ ಮಾಹೆಯಲ್ಲಿ ನಡೆಯಲಿರುವ ಬಿ.ಇಡಿ., ಪದವಿಯ ರೆಗ್ಯುಲರ್ & ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ಲಿಖಿತ ಪರೀಕ್ಷೆಗಳು ಪ್ರಾರಂಭವಾಗಲಿವೆ. ಲಿಖಿತ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು. ಇದಕ್ಕೆ ಪೂರಕವಾದ ಇತರೆ ಮಾಹಿತಿಗಳನ್ನು ಈ ಕೆಳಕಂಡಂತೆ ನೀಡಲಾಗಿದೆ. ಈ ಸಂಬಂಧವಾಗಿ UUCMS ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವ ಹಾಗೂ ಪರೀಕ್ಷಾ ಶುಲ್ಕವನ್ನು ಡಿಜಿಟಲ್ ಮಾದ್ಯಮದ ಮೂಲಕ ಸಂದಾಯ ಮಾಡಲು ತಿಳಿಸಲಾಗಿದೆ.

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವರು(ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು | | |
|---|---|---|
| 1) | ವಿಳಂಬ ಶುಲ್ಕವಿಲ್ಲದೆ | 06.04.2026 ರಿಂದ 17.04.2026 ರವರೆಗೆ |
| 2) | ವಿಳಂಬ ಶುಲ್ಕ ರೂ.120=00 ರಂತೆ (ಪ್ರತಿ ಸೆಮಿಸ್ಟರ್‌ಗೆ) | 18.04.2026 ರಿಂದ 20.04.2026 ರವರೆಗೆ |
| 3) | ವಿಳಂಬ ಶುಲ್ಕ ರೂ.660=00 ರಂತೆ (ಪ್ರತಿ ಸೆಮಿಸ್ಟರ್‌ಗೆ) | 21.04.2026 ರಿಂದ 22.04.2026 ರವರೆಗೆ |

### ಶುಲ್ಕದ ವಿವರಗಳು
### ಪ್ರಥಮ ಹಾಗೂ ತೃತೀಯ ಸೆಮಿಸ್ಟರ್‌ನ ಬಿ.ಇಡಿ., ವಿದ್ಯಾರ್ಥಿಗಳಿಗೆ

| ಕ್ರ. ಸಂ. | ವಿವರ | ಪ್ರಸ್ತುತ ಶುಲ್ಕದ ವಿವರ |
|---|---|---|
| 1 | ಪರೀಕ್ಷಾ ಅರ್ಜಿ ಶುಲ್ಕ | ರೂ.110.00 |
| 2 | ಪ್ರತಿ ಸೆಮಿಸ್ಟರ್ (ಪೂರ್ಣ ಪರೀಕ್ಷೆಗೆ) | ಪರೀಕ್ಷಾ ಶುಲ್ಕ ರೂ.1,166.00<br>ಅಂಕಪಟ್ಟಿ ಶುಲ್ಕ ರೂ.264.00<br>ಒಟ್ಟು ಶುಲ್ಕ ರೂ.1,430.00 |
| 3 | ಪ್ರತಿ ಪತ್ರಿಕೆಗೆ (ಥಿಯರಿ ಪರೀಕ್ಷೆ)<br>(ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ) | ರೂ.242.00 |
| 4 | ಪ್ರಾಯೋಗಿಕ ಪರೀಕ್ಷೆಗೆ (ಪ್ರತಿ ಪತ್ರಿಕೆಗೆ)<br>(ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ) | ರೂ.363.00 |
| 5 | ರಿಪೀಟರ್ಸ್ ವಿದ್ಯಾರ್ಥಿಗಳಿಗೆ – ಅಂಕಪಟ್ಟಿ ಶುಲ್ಕ | ರೂ.264.00 |

| ವಿಶೇಷ ಸೂಚನೆ: |
|---|
| 2022-23ರ ಸಾಲಿನ ವಿದ್ಯಾರ್ಥಿಗಳಿಗೆ Double the Duration ಪ್ರಕಾರ 2025-26ರ ಸಾಲಿನ ಪರೀಕ್ಷೆ ಕಡೆಯ ಪರೀಕ್ಷೆಯಾಗಿದ್ದು ನಂತರದಲ್ಲಿ ನಡೆಯುವ ಪರೀಕ್ಷೆಗಳಿಗೆ ಹಾಜರಾಗಲು ಅವಕಾಶವಿರುವುದಿಲ್ಲ. |

## : ವಿದ್ಯಾರ್ಥಿಗಳಿಗೆ ಸೂಚನೆ :

- ವಿದ್ಯಾರ್ಥಿಗಳು **Online** ಮುಖಾಂತರ ಅರ್ಜಿ ಸಲ್ಲಿಸಲು **https://uucms.karnataka.gov.in /Login/Index** ನಲ್ಲಿ **Student login** ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.
- ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಪಾವತಿ ಮಾಡುವುದಕ್ಕೆ ಮುಂಚಿತವಾಗಿ ಎಲ್ಲಾ ಮಾಹಿತಿಗಳ ನಿಖರತೆಯನ್ನು ಖಾತರಿಪಡಿಸಿಕೊಳ್ಳತಕ್ಕದ್ದು.
- ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಪ್ರಥಮ ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳುವುದು.
- ವಿದ್ಯಾರ್ಥಿಗಳು ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ ಬರೆಯುತ್ತಿದ್ದರೆ, ಅಂತಹ ಸಂದರ್ಭದಲ್ಲಿ ವಿಷಯಗಳ ಆಯ್ಕೆಯು ವಿದ್ಯಾರ್ಥಿಗೆ ಇರುವುದಿಲ್ಲ.
- ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಪರೀಕ್ಷೆ ಬರೆಯಬೇಕಾದ ವಿಷಯಗಳನ್ನು ಖಚಿತ ಪಡಿಸಿಕೊಳ್ಳುವುದು ಹಾಗೂ ನಂತರದಲ್ಲಿ ತಿದ್ದುಪಡಿಗೆ ಅವಕಾಶವಿರುವುದಿಲ್ಲ.
- ವಿದ್ಯಾರ್ಥಿಯು UUCMS login ಮುಖಾಂತರ Payment Gateway ಸೌಲಭ್ಯವನ್ನು ಬಳಸಿಕೊಂಡು (Debit Card/ Credit Card / Net Banking / Wallet, ಇತ್ಯಾದಿ) ಹಣ ಪಾವತಿಸಬಹುದು.
- ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಶೈಕ್ಷಣಿಕ ಅವಧಿ ಮುಗಿಯುವರೆಗೂ ತರಗತಿಗಳಿಗೆ ಹಾಜರಾಗಿ ನಿಯಮಾನುಸಾರ ಕನಿಷ್ಠ 75% ಹಾಜರಾತಿ ಗಳಿಸುವುದು ಕಡ್ಡಾಯವಾಗಿರುತ್ತದೆ. ಇಲ್ಲವಾದಲ್ಲಿ ಪರೀಕ್ಷೆ ಬರೆಯಲು ಅನರ್ಹರಾಗುತ್ತಾರೆ.
- ಈ ಅವಕಾಶವು ಸದರಿ ಕೋರ್ಸಿನ ಎರಡರಷ್ಟು ಅವಧಿಗೆ (Double the Duration) ಮಾತ್ರ ಅನ್ವಯಿಸುತ್ತದೆ.

**ವಿಶೇಷ ಸೂಚನೆ:**

- ➢ ವಿದ್ಯಾರ್ಥಿಗಳು Internet Browsing Centerನ ಮಾಲೀಕರ ಬ್ಯಾಂಕ್ ಖಾತೆಯ ಮೂಲಕ ವಿಶ್ವವಿದ್ಯಾನಿಲಯಕ್ಕೆ ಹಣ ಪಾವತಿಸುವ ಸಂದರ್ಭದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರಾಗಿರುತ್ತಾರೆ ಹಾಗೂ ಎರಡು ಬಾರಿ ಶುಲ್ಕ ಪಾವತಿಸಿದ್ದಲ್ಲಿ ಮರುಪಾವತಿಗೆ (No Refund) ಅವಕಾಶವಿರುವುದಿಲ್ಲ.
- ➢ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಕೂಡ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು.

## : ಪ್ರಾಚಾರ್ಯರಿಗೆ ಸೂಚನೆ :

- ಪರೀಕ್ಷೆಗೆ ಸಂಬಂಧಪಟ್ಟ ಎಲ್ಲಾ ಕಾರ್ಯಗಳನ್ನು UUCMS ನ College login ಮುಖಾಂತರ ಮಾಡಬೇಕು.
- ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸುವುದಕ್ಕಿಂತ ಮುಂಚಿತವಾಗಿ ಪ್ರವೇಶಾನುಮೋದನೆ ಶೈಕ್ಷಣಿಕ ಅರ್ಹತೆ ಹೊಂದಿದ್ದಾರೆ ಎಂದು ಖಚಿತ ಪಡಿಸಿಕೊಳ್ಳಬೇಕು.
- **UUCMS**ನ login ಮುಖಾಂತರ ವಿದ್ಯಾರ್ಥಿಗಳ ಪರೀಕ್ಷೆ ಅರ್ಹತೆಯನ್ನು ದೃಢೀಕರಿಸಬೇಕು.
- ಕಾಲೇಜು ದೃಢೀಕರಿಸಿದ ಮಾಹಿತಿಗಳನ್ನು ವಿದ್ಯಾರ್ಥಿಗಳಿಗೆ UUCMSನ login ಮುಖಾಂತರ ತಿಳಿಸಲಾಗುವುದು.
- S.S.P ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸಬೇಕು.
- ರೂ. 2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು. ಮರುಯತ್ನದ (Repeaters) ಮತ್ತು ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯಿತಿ ಇರುವುದಿಲ್ಲ.
- ಪ್ರವರ್ಗ-1ಕ್ಕೆ 2.5 ಲಕ್ಷ ಹಾಗೂ ರೂ. 1 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ, ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಬರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ:ಸ.ಕ.ಇ./201/ಬಿ.ಎಂ.ಎಸ್.2011 ಬೆಂಗಳೂರು ದಿನಾಂಕ:23-06-2012ರಲ್ಲಿ ತಿಳಿಸಿರುತ್ತಾರೆ.

- ವಿದ್ಯಾರ್ಥಿಗಳ ಪರೀಕ್ಷಾ ಪ್ರವೇಶ ಪತ್ರವನ್ನು ವಿಶ್ವವಿದ್ಯಾನಿಲಯದ ನಿರ್ದೇಶಾನುಸಾರ ಕಾಲೇಜುಗಳಲ್ಲಿ ಮುದ್ರಿಸಿ ಒದಗಿಸತಕ್ಕದ್ದು.
- ವಿಶ್ವವಿದ್ಯಾನಿಲಯವು ಕಾಲೇಜುಗಳಿಗೆ ಒದಗಿಸುವ ಪ್ರಶ್ನೆ ಪತ್ರಿಕೆಗಳ ಸಂಖ್ಯೆಯನ್ನು UUCMS ನ login ಮುಖಾಂತರ ತಿಳಿಸುವುದು. ಕಾಲೇಜುಗಳು ಇದನ್ನು ಪರಿಶೀಲಿಸಿ ಯಾವುದಾದರು ವ್ಯತ್ಯಯವಿದ್ದರೆ ಅದನ್ನು ವಿಶ್ವವಿದ್ಯಾನಿಲಯದ ಅಧಿಕಾರಿಗಳ ಗಮನಕ್ಕೆ ತರುವುದು.
- Invigilator Dairy ಯನ್ನು (02 ಪ್ರತಿಗಳು) ಆನ್‌ಲೈನ್ ಮೂಲಕವೇ ಸಿದ್ಧಪಡಿಸಿಕೊಳ್ಳಬೇಕು ಹಾಗೂ ಆಯಾ ದಿನದ ಉತ್ತರ ಪತ್ರಿಕೆ ಬಂಡಲ್‌ಗಳ ಜೊತೆಯಲ್ಲಿಯೇ 01 ಪ್ರತಿಯನ್ನು ಕಳುಹಿಸಿಕೊಡುವುದು.
- ಪರೀಕ್ಷೆಗೆ ಗೈರುಹಾಜರಾದ ವಿದ್ಯಾರ್ಥಿಗಳ ನೊಂದಣಿ ಸಂಖ್ಯೆ ಮತ್ತು ವಿಷಯವನ್ನು (QP Code) ಆನ್‌ಲೈನ್ ಮೂಲಕವೇ ನಮೂದಿಸುವುದು.
- ನಿಯಮಾನುಸಾರ ವಿಶ್ವವಿದ್ಯಾನಿಲಯವು ಅನುಮೋದನೆ ನೀಡಿರುವ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಅರ್ಜಿ ಹಾಗೂ ಶುಲ್ಕ ಸಂಗ್ರಹಿಸಬೇಕು.
- **ಆಂತರಿಕ ಅಂಕಗಳ ಮಾರ್ಕ್ಸ್ ಲೀಸ್ಟ್‌ಗಳನ್ನು ವಿಶ್ವವಿದ್ಯಾನಿಲಯದ TERM ಸಮಿತಿಯು ಶಿಫಾರಸ್ಸು ಮಾಡಿದ ನಂತರ ಹಾಗೂ ವಿಷಯವಾರು ಹಾಜರಾತಿಯನ್ನು ಕಡ್ಡಾಯವಾಗಿ ಪರೀಕ್ಷೆ ಪ್ರಾರಂಭಕ್ಕೂ ಮುಂಚೆಯೇ Online ಮುಖಾಂತರ ಸಲ್ಲಿಸಬೇಕು. ಫಲಿತಾಂಶ ಪ್ರಕಟಿಸಿದ ನಂತರ ಯಾವುದೇ ತಿದ್ದುಪಡಿ/ ಮಾರ್ಪಾಡುಗಳಿಗೆ ಅವಕಾಶ ಇರುವುದಿಲ್ಲ.**
- **ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ ಯಾವುದೇ ಕಾರಣಕ್ಕೂ ಹಾರ್ಡ್ ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.**
- ಉತ್ತರ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನು ಸಹ ದಿನಾಂಕ:22-04-2026 ರೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.
- ಪರೀಕ್ಷಾ ಶುಲ್ಕವನ್ನು ಪಾವತಿಸದೇ ಇರುವ ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯಲು ಅನುಮತಿಸಿ ನಂತರದಲ್ಲಿ ಫಲಿತಾಂಶ ಬಾರದ ಬಗ್ಗೆ ದೂರು ನೀಡುವುದನ್ನು ಗಮನಿಸಲಾಗಿದೆ. ಈ ಬಾರಿ ಇಂತಹ ಪ್ರಕರಣಗಳು ಬಾರದಂತೆ ಎಚ್ಚರವಹಿಸಬೇಕು. ಕಾರಣ, ಒಮ್ಮೆ ಪರೀಕ್ಷೆ ಬರೆಸಿದಲ್ಲಿ ಅಭ್ಯರ್ಥಿ ಪಟ್ಟಿಯಲ್ಲಿ ಇಲ್ಲದವರ ಫಲಿತಾಂಶ ನೀಡಲು ಅವಕಾಶವಿರದಂತೆ ಸಾಫ್ಟ್‌ವೇರ್‌ನಲ್ಲಿ ಮಾರ್ಪಾಡು ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಇದನ್ನು ತಿಳಿಸುವುದು.
- ಪ್ರಸ್ತುತ ಸಾಲಿನಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ವಿಭಾಗದಿಂದ ಅನುಮೋದನೆಗೊಂಡ ವಿದ್ಯಾರ್ಥಿಗಳನ್ನು ಮಾತ್ರ ಪರೀಕ್ಷೆಗೆ ಹಾಜರುಪಡಿಸುವ ಹೊಣೆಯು ಕಾಲೇಜಿನ ಪ್ರಾಂಶುಪಾಲರದ್ದಾಗಿರುತ್ತದೆ. ತಪ್ಪಿದಲ್ಲಿ ತಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೆ.
- ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳ ಪಟ್ಟಿಯನ್ನು (Absentee Statement) ಪ್ರತ್ಯೇಕವಾಗಿ ಆಯಾ ದಿನದಂದೇ ವಿಶ್ವವಿದ್ಯಾನಿಲಯಕ್ಕೆ ಕಳುಹಿಸಬೇಕು.
- ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಆನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ದಟ್ಟಣೆಯ ಅಡಚಣೆ ತಪ್ಪಿಸಬಹುದಾಗಿದೆ.

## : ವಿಶೇಷ ಸೂಚನೆ :

ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆ ಹಾಗೂ ಯು.ಜಿ.ಸಿ.ಯ ಆದೇಶದಂತೆ ವಿದ್ಯಾರ್ಥಿಗಳ ಎಲ್ಲಾ ಶೈಕ್ಷಣಿಕ ದಾಖಲೆಗಳನ್ನು National Academic Depository (NAD)ಗೆ ದಾಖಲಿಸಲಾಗುತ್ತಿದೆ. ಈ ಸಂಬಂಧ ಎಲ್ಲಾ ವಿದ್ಯಾರ್ಥಿಗಳು NADಗೆ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ನೋಂದಣಿ ಮಾಡಿಕೊಂಡ ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳನ್ನು NAD ವೆಬ್‌ಸೈಟ್‌ನಲ್ಲಿ ಪಡೆದುಕೊಳ್ಳಲು ಅವಕಾಶ ನೀಡಲಾಗುವುದು.

ಎಲ್ಲಾ ವಿದ್ಯಾರ್ಥಿಗಳು ABC IDಯನ್ನು Create ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಹಾಗೂ ಇದನ್ನು ಪ್ರಾಂಶುಪಾಲರು ತಮ್ಮ ಲಾಗಿನ್‌ನಲ್ಲಿ Approve ಮಾಡುವುದು ಕಡ್ಡಾಯವಾಗಿರುತ್ತದೆ.

ಕುಲಸಚಿವ (ಪರೀಕ್ಷಾಂಗ)
ಕುಲಸಚಿವರು (ಪರೀಕ್ಷಾಂಗ)
ದಾವಣಗೆರೆ ವಿಶ್ವವಿದ್ಯಾನಿಲಯ
ಶಿವಗಂಗೋತ್ರಿ, ದಾವಣಗೆರೆ - 577 007

ಗೆ,

ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಎಲ್ಲಾ ಬಿ.ಇಡಿ., ಕಾಲೇಜುಗಳ ಪ್ರಾಚಾರ್ಯರುಗಳಿಗೆ. – ವಿದ್ಯಾರ್ಥಿಗಳ ಮಾಹಿತಿಗಾಗಿ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.

ಪು.ತಿ.ನೋ...

ಪ್ರತಿಗಳು:

1. ಸಮಾಜ ಕಲ್ಯಾಣ ಅಧಿಕಾರಿಗಳು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
2. ಜಿಲ್ಲಾಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ದಾವಣಗೆರೆ/ಚಿತ್ರದುರ್ಗ ಜಿಲ್ಲೆ.
3. ಆಪ್ತಕಾರ್ಯದರ್ಶಿಗಳು, ಕುಲಪತಿಗಳ/ಕುಲಸಚಿವ(ಆಡಳಿತ) ರವರ ಆಪ್ತ ಕಾರ್ಯಾಲಯ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
4. ಉಪಕುಲಸಚಿವರು ಪರೀಕ್ಷಾಂಗ/ಆಡಳಿತ/ಹಣಕಾಸು ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
5. ಅಧೀಕ್ಷಕರು & ವಿಷಯ ನಿರ್ವಾಹಕರು, ಪರೀಕ್ಷಾಂಗ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ಶಿವಗಂಗೋತ್ರಿ, ದಾವಣಗೆರೆ.
6. ಕಛೇರಿ ಪ್ರತಿ.